**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/329/ಖಾಕಾಕಾ/2012-13/ನೇ.ವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:23.09.2016.

# ಸುತ್ತೋಲೆ

ವಿಷಯ: ಖಾಸಗಿ ಅನುದಾನಿತ ಕಾನೂನು ಕಾಲೇಜುಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: (1) ದಿನಾಂಕ:26.08.2015ರ ಸರ್ಕಾರದ ಅಧೀನ ಕಾರ್ಯದರ್ಶಿ, ಕಾನೂನು ಇಲಾಖೆ, ಬೆಂಗಳೂರು ಇವರ ಆದೇಶ.
(2) ದಿನಾಂಕ:29.02.2016ರ ಸರ್ಕಾರದ ಪತ್ರ ಸಂಖ್ಯೆ: ಲಾ/19/ ಕೆಎಲ್‌ಎಮ್/2016.

*****

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ 19 ಖಾಸಗಿ ಅನುದಾನಿತ ಕಾನೂನು ಕಾಲೇಜುಗಳ ಬೋಧಕ ಹಾಗೂ ಬೋಧಕೇತರರನ್ನು ಉಲ್ಲೇಖ (1)ರ ಆದೇಶದಲ್ಲಿ ವೇತನಾನುದಾನಕ್ಕೆ ಒಳಪಡಿಸಲಾಗಿದೆ. ಸದರಿ ಆದೇಶದಲ್ಲಿ ಗುರುತಿಸಲಾದ ಬ್ಯಾಕ್‌ಲಾಗ್ ಹುದ್ದೆಗಳನ್ನು ಆದೇಶದ ದಿನಾಂಕದಿಂದ 06 ತಿಂಗಳೊಳಗಾಗಿ ಭರ್ತಿ ಮಾಡತಕ್ಕದ್ದು, ತಪ್ಪಿದಲ್ಲಿ ನೀಡಲಾಗಿರುವ ವೇತನಾನುದಾನವು ರದ್ದುಗೊಳ್ಳುತ್ತದೆ ಎಂಬುದಾಗಿ ಷರತ್ತು ವಿಧಿಸಲಾಗಿತ್ತು.

ಆದರೆ, ಉಲ್ಲೇಖಿತ ಆದೇಶದಲ್ಲಿ ತಿಳಿಸಿರುವಂತೆ 19 ಖಾಸಗಿ ಅನುದಾನಿತ ಕಾನೂನು ಕಾಲೇಜಿನ ಆಡಳಿತ ಮಂಡಳಿ ಅವರ ವ್ಯಾಪ್ತಿಯಲ್ಲಿ ಬರುವ ಕಾನೂನು ಕಾಲೇಜಿಗೆ ಗುರುತಿಸಲಾಗಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಈವರೆವಿಗೂ ಭರ್ತಿ ಮಾಡದಿರುವುದು ಕಂಡು ಬಂದಿರುತ್ತದೆ.

ಆದ್ದರಿಂದ, ಉಲ್ಲೇಖ (1)ರ ಆದೇಶದಲ್ಲಿ ತಿಳಿಸಿರುವಂತೆ, 19 ಖಾಸಗಿ ಅನುದಾನಿತ ಕಾನೂನು ಕಾಲೇಜಿಗೆ ಗುರುತಿಸಲಾಗಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಉಲ್ಲೇಖ (2)ರ ಪತ್ರದಲ್ಲಿ ತಿಳಿಸಿರುವ ಪ್ರಕಾರ ಕೂಡಲೇ ಕ್ರಮ ತೆಗೆದುಕೊಂಡು, ಆಯ್ಕೆ ಅನುಮೋದನೆಗೆ ಈ ಕಛೇರಿಗೆ ಕಳುಹಿಸಿಕೊಡುವಂತೆ ಸೂಚಿಸಲಾಗಿದೆ. ಆಡಳಿತ ಮಂಡಳಿಗಳು ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ವಿಳಂಬ ಮಾಡಿದಲ್ಲಿ ಉಲ್ಲೇಖ (1)ರ ಆದೇಶದಲ್ಲಿ ತಿಳಿಸಿರುವಂತೆ ಕಾಲೇಜಿಗೆ ನೀಡಲಾಗುವ ಅನುದಾನವನ್ನು ರದ್ದುಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದು ಎಂಬುದಾಗಿ ಮತ್ತೊಮ್ಮೆ ತಿಳಿಸಲಾಗಿದೆ.

"ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ."

A.Z. Murshidhar

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು.**

**ಇವರಿಗೆ:**

1) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಕಲಬುರಗಿ ಮತ್ತು ಶಿವಮೊಗ್ಗ - ತಮ್ಮ ಕಛೇರಿ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಕಾನೂನು ಕಾಲೇಜಿನ ಆಡಳಿತ ಮಂಡಳಿ/ಪ್ರಾಂಶುಪಾಲರುಗಳು, ಗುರುತಿಸಲಾಗಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಕೂಡಲೇ ಕ್ರಮ ತೆಗೆದುಕೊಳ್ಳುವಂತೆ ಅನುಸರಣೆ ಮಾಡುವುದು.
2) 19 ಖಾಸಗಿ ಅನುದಾನಿತ ಕಾನೂನು ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷರು/ ಕಾರ್ಯದರ್ಶಿಯವರಿಗೆ ಅಗತ್ಯ ಕ್ರಮಕ್ಕಾಗಿ (ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಪ್ರತ್ಯೇಕವಾಗಿ ಸುತ್ತೋಲೆಯನ್ನು ರವಾನಿಸಲಾಗುವುದಿಲ್ಲ).
3) 19 ಖಾಸಗಿ ಅನುದಾನಿತ ಕಾನೂನು ಕಾಲೇಜಿನ ಪ್ರಾಂಶುಪಾಲರುಗಳಿಗೆ - ಅಗತ್ಯ ಕ್ರಮಕ್ಕಾಗಿ ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್ www.dce.kar.nic.in ರಲ್ಲಿ ಪ್ರಕಟಿಸಲಾಗಿದೆ. ವೆಬ್‌ಸೈಟ್‌ನಿಂದ ಇದನ್ನು ಡೌನ್‌ಲೋಡ್ ಮಾಡಿಕೊಳ್ಳುವುದು.
4) ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಕೂಡಲೇ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

**ಪ್ರತಿಯನ್ನು:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ವಿಕಾಸ ಸೌಧ, ಬೆಂಗಳೂರು - 01.
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಕಛೇರಿ ಪ್ರತಿ.